# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಗಳ ಉತ್ತರ.**

ವಿಷಯ: ಸರ್ಕಾರದ ಕರಡು ಅಧಿಸೂಚನೆ ಸಂಖ್ಯೆ RDPR/597/GPA/2022 ದಿನಾಂಕ: 27/07/2022 ರಾಜ್ಯದ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನು ತೆಗೆದು ಹಾಕುವ ಕುರಿತಂತೆ ಸಲಹೆಗಳನ್ನು ಒಳಗೊಂಡಿರುತ್ತದೆ. ಈ ಸಲಹೆಗಳು ಕಾಯಿದೆಯಾಗಿ ಬದಲಾವಣೆಗೊಂಡು ಕಾರ್ಯತಗೊಂಡಲ್ಲಿ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳ ಕಾಯಿದೆ ಬದ್ಧ ಹಕ್ಕನ್ನು ಮೊಟಕುಗೊಳಿಸುವ ಅಪಾಯವಿರುತ್ತದೆ. ಕರಡು ಅಧಿಸೂಚನೆಯಲ್ಲಿ 12 ಎಲ್, 43 ಎ, 48(4), 48(5)ರಲ್ಲಿ ತಿಳಿಸಿರುವ ಅಂಶಗಳಿಗೆ ತಿಳಿಸಲಾಗಿದೆ. ಅದರಂತೆ ಗ್ರಾಮ ಪಂಚಾಯಿತಿ ಅಧಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನು ತೆಗೆದು ಹಾಕುವ ಪ್ರಕ್ರಿಯೆಗೆ ಸಂಬಂಧಿಸಿ ದೂರು ದಾಖಲಿಸುವ ಮತ್ತು ತನಿಖೆ ನಡೆಸಿ ವರದಿ ನೀಡುವ ಅಧಿಕಾರವನ್ನು ರಾಜ್ಯ ಸರಕಾರದ ಹಂತದಿಂದ ತಾಲ್ಲೂಕು ಪಂಚಾಯತಿಯ ಕಾರ್ಯ ನಿರ್ವಾಹಕ ಅಧಿಕಾರಿಯ ಹಂತಕ್ಕೆ ನೀಡಲಾಗಿದೆ.

ಕಾಯಿದೆಯ ಪ್ರಕರಣ 43 ಎ, 48(4) ಮತ್ತು 48(5) ರಲ್ಲಿ "ದುರ್ನಡತೆ ಮತ್ತು ತಲೆ ತಗ್ಗಿಸುವ ನಡತೆಯಿಂದ ತಪ್ಪಿತಸ್ಥ ನಾಗಿದ್ದಾನೆಂದು" ಎನ್ನುವ ಪದಗಳನ್ನು ಬಳಸಲಾಗಿದೆ. ಆದರೆ ಎಲ್ಲಿಯೂ ದುರ್ನಡತೆ ಮತ್ತು ತಲೆ ತಗ್ಗಿಸುವ ನಡತೆ ಯಾವುದೆಂದು ವಿವರಣೆ ನೀಡಿಲ್ಲ. ಸಾರ್ವಜನಿಕರಿಗೆ ಉತ್ತರಧಾಯಿತ್ವ ಹೊಂದಿರುವ ಗ್ರಾಮ ಪಂಚಾಯಿತಿ ಸದಸ್ಯರನ್ನು ಮೇಲಿನ ಹಂತಗಳ ಚುನಾಯಿತ ಪ್ರತಿನಿಧಿಗಳ ರೀತಿಯಲ್ಲೇ ಗೌರದಿಂದ ನೋಡುವುದು ಸರಕಾರದ ಜವಾಬ್ದಾರಿಯಾಗಿದೆ. ಹೀಗಾಗಿ ಮೇಲಿನ ಉಲ್ಲೇಖದ ಕರಡು ಅಧಿಸೂಚನೆಯನ್ನು ವಾಪಸು ಪಡೆಯುವ ಅಗತ್ಯತೆಯ ಬಗ್ಗೆ.

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಲ್ಲಿ ಗ್ರಾಮ ಪಂಚಾಯತಿ ಸದಸ್ಯನು ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆ ಅಥವಾ ತಲೆತಗ್ಗಿಸುವಂತಹ ನಡತೆಯಿಂದ ತಪ್ಪಿತಸ್ಥನಾಗಿದ್ದಾನೆಂದು, ಕರ್ತವ್ಯ ನಿರ್ವಹಿಸಲು ಅಸಮರ್ಥರಾಗಿದ್ದಾರೆಂದು ಅಥವಾ ತಮ್ಮ ಕರ್ತವ್ಯದಲ್ಲಿ ಅಸಡ್ಡೆ ಉಳ್ಳವರಾಗಿದ್ದಾರೆಂದು ಕಂಡು ಬಂದರೆ ಸರ್ಕಾರವು ಗ್ರಾಮ ಪಂಚಾಯತಿಯ ಶಿಫಾರಸ್ಸಿನಂತೆ ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ಭಾವಿಸಿದಂತಹ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಸದಸ್ಯರನ್ನು ತೆಗೆದುಹಾಕಲು ಅವಕಾಶ ಕಲ್ಪಿಸಲಾಗಿದೆ.

ಸದರಿ ಅಧಿನಿಯಮದ ಪ್ರಕರಣ 48(4) ಮತ್ತು 48(5) ರಂತೆ ಗ್ರಾಮ ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು ಅವನ ಕರ್ತವ್ಯಗಳ ನಿರ್ವಹಣೆಯಲ್ಲಿ ನಿರಂತರ ಆಲಕ್ಷತೆ ತೋರುತ್ತಿರುವುದಕ್ಕಾಗಿ ಅಥವಾ ದುರ್ನಡತೆಯ ತಪ್ಪಿತಸ್ಥನಾಗಿರುವುದು ಕಂಡು ಬಂದರೆ ತಾಲ್ಲೂಕು ಪಂಚಾಯತಿಯಿಂದ ವರದಿಯನ್ನು ಪಡೆದುಕೊಂಡು ಪರಿಶೀಲಿಸಿದ ತರುವಾಯ ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ತರುವಾಯ ಸರ್ಕಾರವು ಅಧ್ಯಕ್ಷ ಅಥವಾ ಉಪಾಧ್ಯಕ್ಷ ಹುದ್ದೆಯಿಂದ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲಾಗುವುದು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 311 ರಲ್ಲಿ ಸರ್ಕಾರವು ನಿಯಮಗಳನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 597 ಗ್ರಾಪಂಅ 2020, ದಿನಾಂಕ:27-07-2022 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರನ್ನು ತೆಗೆದು ಹಾಕುವ ಪ್ರಕ್ರಿಯೆ) ನಿಯಮಗಳು, 2022 ರ ಕರಡನ್ನು ದಿನಾಂಕ:03-08-2022 ರ ಕರ್ನಾಟಕ ರಾಜ್ಯ ಪತ್ರದ ಭಾಗ-4ಎ ರಲ್ಲಿ ಪ್ರಕಟಿಸಲಾಗಿದೆ. ಕರಡಿನಲ್ಲಿ 1) ದೂರನ್ನು ದಾಖಲು ಮಾಡುವ ಪ್ರಕ್ರಿಯೆ, 2) ತನಿಖಾ ವರದಿಯ ಮೇಲೆ ಕ್ರಮ, 3) ಸರ್ಕಾರದ ಹಂತದಲ್ಲಿ ಕ್ರಮ, 4) ವಿಚಾರಣೆ ಕಾರ್ಯ ವಿಧಾನ ಮತ್ತು 5) ವಿಚಾರಣಾ ವರದಿಯ ಮೇಲೆ ಕ್ರಮದ ಬಗ್ಗೆ ವಿವರಿಸಲಾಗಿದೆ.

ಸರ್ಕಾರ ಅಥವಾ ಪ್ರಾದೇಶಿಕ ಆಯುಕ್ತರು ಅಥವಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಯಾವುದೇ ಬಾಧಿತ ವ್ಯಕ್ತಿಯಿಂದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರ ವಿರುದ್ಧ ದುರ್ನಡತೆ ಬಗ್ಗೆ ದೂರನ್ನು ಸ್ವೀಕರಿಸಿದ ತಕ್ಷಣ ಸಂಬಂಧಿಸಿದ ಕಾರ್ಯನಿರ್ವಾಹಕ ಅಧಿಕಾರಿಗೆ ತನಿಖೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ತನಿಖೆಯ ಆಧಾರದ ಮೇಲೆ ವಿಚಾರಣೆ ನಡೆಸಲು ಹಾಗೂ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ತಿಳಿಸಲಾಗಿದೆ. ನಂತರ ಸರ್ಕಾರದಿಂದ 2ನೇ ಕಾರಣ ಕೇಳುವ ನೋಟೀಸನ್ನು ಆರೋಪಿತ ಅಧ್ಯಕ್ಷರು ಅಥವಾ ಉಪಾಧ್ಯಕ್ಷರು ಅಥವಾ ಸದಸ್ಯರಿಗೆ ಜಾರಿಗೊಳಿಸಿ ಲಿಖಿತ ಸಮಜಾಯಿಷಿಯನ್ನು ಪಡೆದು ಸರ್ಕಾರವು ವಿಚಾರಣೆಯನ್ನು ನಡೆಸಿ ಆರೋಪಿತ ಅಧ್ಯಕ್ಷರು ಅಥವಾ ಉಪಾಧ್ಯಕ್ಷರು ಅಥವಾ ಸದಸ್ಯರನ್ನು ತೆಗೆದು ಹಾಕಲು ಕ್ರಮ ಕೈಗೊಳ್ಳಲಾಗುತ್ತದೆ.

ಕರಡು ನಿಯಮಗಳಿಗೆ ಬಾಧಿತರಾಗುವ ವ್ಯಕ್ತಿಗಳು ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರಕ್ಕೆ ಸಲ್ಲಿಸಲು ತಿಳಿಸಲಾಗಿದ್ದು, ಅದರಂತೆ ಆಕ್ಷೇಪಣೆ ಮತ್ತು ಸಲಹೆಗಳು ಸ್ವೀಕೃತವಾಗಿದ್ದು, ನಿಯಮಾನುಸಾರ ಪರಿಶೀಲಿಸಿ ಕರಡು ನಿಯಮಗಳನ್ನು ಅಂತಿಮಗೊಳಿಸಲು ಕ್ರಮ ವಹಿಸಲಾಗುವುದು.

ಸಂಖ್ಯೆ: ಗ್ರಾಅಪ 297 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

33049